# ಶ್ರೀವಿಜಯದಾಸಾರ್ಯಕೃತ ಸುಳಾದಿಗಳು

## “ಶ್ರೀನರಸಿಂಹ ಸುಳಾದಿ”

ರಾಗ–ಕಲ್ಯಾಣ ಧ್ರುವತಾಳ

ವೀರ ಸಿಂಹನೆ ನಾರಸಿಂಹನೆ ದಯ ಪಾರಾ–
ವಾರನೆ ಭಯ ನಿವಾರಣ ನಿರ್ಗುಣ
ಸಾರಿದವರ ಸಂಸಾರ ವೃಕ್ಷದ ಮೂಲ
ಬೇರರಿಸಿ ಕೀಳುವ ಬಿರಿದು ಭಯಂಕರ
ಘೋರಾವತಾರ ಕರಾಳವದನ ಅ–
ಘೋರ ದುರಿತ ಸಂಹಾರ ಮಾಯಾಕಾರ
ಕ್ರೂರ ದೈತ್ಯರ ಶೋಕ ಕಾರಣ ಉದುಭವ
ಈರೇಳು ಭುವನ ಸಾಗರದೊಡೆಯ
ಆ ರೌದ್ರನಾಮಕ ವಿಜಯ ವಿಠ್ಠಲ ನಾರಸಿಂಗ
ವೀರರಸಾತುಂಗ ಕಾರುಣ್ಯಪಾಂಗ ॥ 1 ॥

–ಮಟ್ಟತಾಳ–

ಮಗುವಿನ ರಕ್ಕಸನು ಹಗಲಿರುಳು ಬಿಡದೆ
ಹಗೆಯಿಂದಲಿ ಹೊಯ್ದು ನಗಪನ್ನಗ ವನದಿ
ಗಗನ ಮಿಗಿಲಾದ ಅಗಣಿತ ಬಾಧೆಯಲಿ
ನೆಗೆದು ಒಗದು ಸಾವು ಬಗೆದು ಕೊಲ್ಲುತಿರಲು ಹೇ
ಜಗದವಲ್ಲಭನೇ ಸುಗುಣಾನಾದಿಗನೇ
ನಿಗಮಾ ವಂದಿತನೇ ಪೊಗಳಿದ ಭಕುತರ
ತಗಲಿ ತೊಲಗನೆಂದು ಮಿಗೆ ಕೂಗುತಲಿರಲು
ಯುಗ ಯುಗದೊಳು ದಯಾಳುಗಳ ದೇವರ ದೇವ

ಯುಗಾದಿ ಕೃತನಾಮಾ ವಿಜಯ ವಿಠ್ಠಲ ಹೋ ಹೋ
ಯುಗಳ ಕರವ ಮುಗಿದು ಮಗುವು ಮೊರೆಯಿಡಲು ||2||

-ರೂಪಕತಾಳ-
ಕೇಳಿದಾಕ್ಷಣದಲಿ ಲಾಲಿಸಿ ಭಕ್ತನ್ನ
ಮೌಳಿ ವೇಗದಲಿ ಪಾಲಿಸುವೆನೆಂದು
ತಾಳಿ ಸಂತೋಷವ ತೂಳಿ ತುಂಬಿದಂತೆ
ಮೂಲೋಕದ ಪತಿಯಾಲಯದಿಂದ ಸು-
ಶೀಲ ದುರ್ಲಭ ನಾಮ ವಿಜಯ ವಿಠ್ಠಲ ಪಂಚ-
ಮೌಳಿ ಮಾನವ ಕಂಭ ಸೀಳಿ ಮೂಡಿದ ದೇವ ॥3॥

-ಝುಂಪೆತಾಳ-
ಲಟಲಟಾ ಲಟಲಟಾ ಲಟ ಕಟಿಸಿ ವನಜಜಾಂಡ
ಕಟಹ ಪಟ ಪಟ ಪುಟುತ್ಕಟದಿ ಬಿಚ್ಚುತಲಿರಲು
ಪುಟ ಪುಟ ಪುಟನೆಗೆದು ಚೀರಿಹಾರುತ್ತ ಪ-
ಲ್ಕಟಕಟಾ ಕಟ ಕಡಿದು ರೋಷದಿಂದ
ಮಿಟಿ ಮಿಟಿ ಮಿಟನೆ ರಕ್ತಾಕ್ಷಿಯಲ್ಲಿ ನೋಡಿ
ತಟಿತ್ಕೋಟಿ ಊರ್ಭಟಗೆ ಅರ್ಭಟವಾಗಿರಲು
ಕುಟಿಲ ರಹಿತ ವ್ಯಕ್ತ ವಿಜಯ ವಿಠ್ಠಲ ಶಕ್ತ
ದಿಟ ನಿಟಿಲ ನೇತ್ರ ಸುರಕಟಕ ಪರಿಪಾಲಾ ||4||

-ತ್ರಿವಿಡಿತಾಳ-

ಬೊಬ್ಬಿರಿಯೇ ವೀರ ಧ್ವನಿಯಿಂದ ತನಿಗಿಡಿ
ಹಬ್ಬಿ ಮುಂಚೋಣಿ ಉರಿ ಹೊರಗೆದ್ದು ಸುತ್ತೆ
ಉಬ್ಬಸ ರವಿಗಾಗೆ, ಅಬ್ಜಾಂಡ ನಡುಗುತಿರೆ
ಅಬ್ಧಿಸಪುತ ಉಕ್ಕಿ ಹೊರಚೆಲ್ಲಿ ಬರುತಿರೆ
ಅಬ್ಜ ಭವಾದಿಗಳು ತಬ್ಬಿಬ್ಬಿ ಗೊಂಡರು

ಅಬ್ಬರವೇನೆನುತ ನಭದ ಗೂಳಿಯು ತಗಿಯೆ
ಶಬ್ದ ತುಂಬಿತು ಅವ್ಯಾಕೃತಾಕಾಶ ಪರಿಯಂತ
ನಿಬ್ಬರ ತರುಗಿರಿ ಝುರಿ ಝುರಿಸಲು
ಒಬ್ಬರಿಗೊಶವಲ್ಲದ ನಮ್ಮಾ ವಿಜಯವಿಠಲ
ಇಬ್ಬಗೆಯಾಗಿ ಕಂಭದಿಂದ ಪೊರಮಟ್ಟಾ ||5||

- ಅಟ್ಟತಾಳ –

ಘುಡಿ ಘುಡಿಸುತ ಕೋಟಿ ಸಿಡಿಲು ಗಿರಿಗೆ ಬಂದು
ಹೊಡೆದಂತೆ ಚೀರಿ ಬೊಬ್ಬಿಡುತಲಿ ಲಂಘಿಸಿ
ಹಿಡಿದು ರಕ್ಕಸನ್ನ ಕೆಡಹಿ ಮಂಡಿಯ ತುಡುಕಿ
ತೊಡಿಯ ಮೇಲಿರಿಸಿ ಹೇರೊಡಲ ಕೊರುಗುರದಿಂದ
ಪಡುವಲ ಗಡಲ ತಡಿಯ ತರಣಿಯ ನೋಡಿ
ಕಡುಗೋಪದಲಿ ಸದೆಬಡಿದು ರಕ್ಕಸನ ಕೆಡಹಿ
ನಿಡಿಗರಳನು ಕೊರಳಡಿಯಲ್ಲಿ ಧರಿಸಿದ
ಸಡಗರದ ದೈವ ಕಡುಗಲಿ ಭೂರ್ಭೂವ ವಿಜಯ ವಿಠ್ಠಲ
ಪಾಲ್ಗಡಲೊಡೆಯಾ ಶರಣರೊಡೆಯ ಒಡನೊಡನೆ ||6||

-ಆದಿತಾಳ-

ಉರಿಮಸೆಗೆ ಚತುರ್ದಶ ಧರಣಿ ತಲ್ಲಣಿಸಲು
ಪರಮೇಷ್ಠಿ ಹರ ಸುರರು ಸಿರಿದೇವಿಗೆ ಮೊರೆಯಿಡಲು
ಕರುಣದಿಂದಲಿ ತನ್ನ ಶರಣನ್ನ ಸಹಿತ ನಿನ್ನ
ಚರಣಕ್ಕೆ ಎರಗಲು ಪರಮ ಶಾಂತನಾಗಿ
ಹರಹಿದೆ ದಯವನ್ನು ಸುರರು ಕುಸುಮ ವರುಷ
ಕರೆಯಲು ಭೇರಿ ವಾದ್ಯ ಮೊರೆ ಉತ್ತರರೆ ಎನುತ
ಪರಿಪರಿ ವಾಲಗ ವಿಸ್ತಾರದಿಂದ ಕೈಕೊಳ್ಳುತ್ತ
ಮೆರೆದು ಸುರರುಪದ್ರ ಹರಿಸಿ ಬಾಲಕನ ಕಾಯ್ದೆ
ಪರದೈವ ಗಂಭೀರಾತ್ಮ ವಿಜಯ ವಿಠ್ಠಲ ನಿಮ್ಮ
ಚರಿತೆ ದುಷ್ಟರಿಗೆ ಭೀಕರವೋ ಸಜ್ಜನ ಪಾಲಾ ||7||

-ಜತೆ-

ಪ್ರಹ್ಲಾದವರದ ಪ್ರಪನ್ನ ಕ್ಲೇಶಭಂಜನ್ನ ।
ಮಹಾಹವಿಷೆ ವಿಜಯವಿಠ್ಠಲ ನರಮೃಗವೇಷಾ ||8||

---

Collection by Narahari Sumadhwa